ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 129 ರಾಸ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:18.12.2020

## ಸುತ್ತೋಲೆ

**ವಿಷಯ: ಕೋವಿಡ್- 19ರ ಸೋಂಕು ತಡೆಗಟ್ಟುವ ಸಲುವಾಗಿ ನಿಯೋಜಿಸಲಾಗಿರುವ ಅಧಿಕಾರಿ/ನೌಕರರುಗಳ ಕರ್ತವ್ಯ ನಿರ್ವಹಣೆಯ ಬಗ್ಗೆ.**

****

ಕೋವಿಡ್-19ರ ಸೋಂಕು ನಿಯಂತ್ರಣ ತಡೆಗಟ್ಟುವ ಸಲುವಾಗಿ, ರಾಜ್ಯದ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ನೌಕರರುಗಳನ್ನು ನಿಯೋಜಿಸಲಾಗಿದ್ದು, ಸದರಿ ಅಧಿಕಾರಿ/ನೌಕರರುಗಳ ನಿಯೋಜನೆಯನ್ನು ಮುಂದುವರೆಸುವ ಅವಶ್ಯಕತೆ ಇದೆ. ಅದರೊಂದಿಗೆ ಅವರ ಮಾತೃ ಇಲಾಖೆಗಳಲ್ಲಿನ ಸಾರ್ವಜನಿಕ ಕೆಲಸ ಕಾರ್ಯಗಳನ್ನೂ ನಿರ್ವಹಿಸುವ ಅನಿವಾರ್ಯತೆ ಇರುತ್ತದೆಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಆದೇಶಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ರಾಜ್ಯದ ವಿವಿಧ ಇಲಾಖೆಗಳಿಂದ ಕೋವಿಡ್-19 ಕರ್ತವ್ಯಗಳಿಗೆ ನಿಯೋಜಿಸಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ಇನ್ನುಮುಂದೆ ವಾರದಲ್ಲಿ ನಿರಂತರ 3 ದಿನಗಳ ಕಾಲ ತಮ್ಮ ಮಾತೃ ಇಲಾಖೆಯ ನಿಯಮಿತ ಕೆಲಸವನ್ನು ಮಾಡಲು ಮತ್ತು ಉಳಿದ ನಾಲ್ಕು ದಿನಗಳು ಕೋವಿಡ್-19ರ ಕರ್ತವ್ಯಗಳನ್ನು ನಿರ್ವಹಿಸುವಂತೆ ಈ ಮೂಲಕ ಸೂಚಿಸಿದೆ.

ಈ ಮೇಲಿನಂತೆ ಕರ್ತವ್ಯ ನಿರ್ವಹಿಸಲು ಅನುವಾಗುವಂತೆ, ಬಿಬಿಎಂಪಿ ವ್ಯಾಪ್ತಿಗೆ ಸಂಬಂಧಿಸಿದಂತೆ ವಲಯ ಸಂಯೋಜಕರು ಮತ್ತು ಜಿಲ್ಲೆಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಪ್ರತಿ ಅಧಿಕಾರಿ/ಸಿಬ್ಬಂದಿಗಳು ಅವರ ಮಾತೃ ಇಲಾಖೆಯ ನಿಯಮಿತ ಕೆಲಸಗಳನ್ನು ಮಾಡುವ 03 ದಿನಗಳನ್ನು ನಿರ್ಧರಿಸತಕ್ಕದ್ದು.

18/12/2020

**(ಬಿ.ನಾಗಭೂಷಣ್)**
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ

ಇವರಿಗೆ :

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು
3. ಎಲ್ಲಾ ಜಿಲ್ಲಾಧಿಕಾರಿಗಳು
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
5. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,